ಸುವರ್ಣ ಕರ್ನಾಟಕ ಪ್ರಶಸ್ತಿ ಪುರಸ್ಕೃತ
SAMYUKTA KARNATAKA
ಸಂಯುಕ್ತ ಕರ್ನಾಟಕ
ಕನ್ನಡಿಗರ ಸಾಕ್ಷಿಪ್ರಜ್ಞೆ
ಶತಕದತ್ತ ಓಟ... ತೊಂಬತ್ತರ ನೋಟ

# 'ಹರ್ಡೇಕರ ಮಂಜಪ್ಪ ಥೀಮ್ ಪಾರ್ಕ್ ಸ್ಥಾಪನೆಯಾಗಲಿ'

**ಆಲಮಟ್ಟಿ:** ಆಲಮಟ್ಟಿಯಲ್ಲಿ ಹರ್ಡೇಕರ ಮಂಜಪ್ಪನವರ ಜೀವನವನ್ನು ಸಾರುವ ಥೀಮ್ ಪಾರ್ಕ್ ಅವಶ್ಯಕತೆಯನ್ನು ಒತ್ತಿ ಹೇಳಿದ ಶ್ರೀಗಳು, ಹರ್ಡೇಕರ ಅವರ ಆಶಯದಂತೆ ನಿಸರ್ಗ ಚಿಕಿತ್ಸಾ ಕೇಂದ್ರದ ಸ್ಥಾಪನೆ ಮಾಡುವಂತೆ ಸರಕಾರಕ್ಕೆ ಮುಂಡರಗಿ ತೋಂಟದಾರ್ಯಮಠದ ನಿಜಗುಣಪ್ರಭು ತೋಂಟದಾರ್ಯ ಶ್ರೀಗಳು ಒತ್ತಾಯಿಸಿದರು.

ಅವರು ಗುರುವಂದನೆ ಹಾಗೂ ಗ್ರಂಥ ಬಿಡುಗಡೆಯ ಸಾನ್ನಿಧ್ಯ ವಹಿಸಿ ಮಾತನಾಡಿ, ಕನ್ನಡ ಭಾಷೆ ಉಳಿವಿಗೆ ಬಸವಣ್ಣನವರು ಅನ್ಯ ರಾಜ್ಯಗಳಿಂದ ವಚನಕಾರರಿಂದ ಕನ್ನಡದಲ್ಲಿಯೇ ವಚನಗಳನ್ನು ಬರೆಯಿಸಿದರು. ಪ್ರಜಾಪ್ರಭುತ್ವ ಚಿಂತನೆ ಆರಂಭವಾಗಿದ್ದೆ ಬಸವನಬಾಗೇವಾಡಿಯಲ್ಲಿ ಅದನ್ನು ಕಟ್ಟಿದವರು ಬಸವಣ್ಣನವರು. ಪ್ರಜಾಪ್ರಭುತ್ವ ಜಾರಿಗಾಗಿಯೇ ವಚನಕ್ರಾಂತಿ ಮಾಡಿದರು ಎಂದರಲ್ಲದೆ ವಿಜಯಪುರ ಜಿಲ್ಲೆ ಶರಣರ ಕಾಲದಲ್ಲಿಯೇ ಶಿಕ್ಷಣ ಕ್ರಾಂತಿ ಮಾಡಿದ ಜಿಲ್ಲೆಯಾಗಿದೆ ಎಂದು ವಿಶ್ಲೇಷಿಸಿದರು.

ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ತಾವು ಶಿಕ್ಷಣ ಸಚಿವನಾಗಿದ್ದಾಗ 1039 ಪ್ರೌಢಶಾಲೆ ಮತ್ತು 500 ಪಿಯು ಕಾಲೇಜ್‌ಗಳು ಮಂಜೂರು ಮಾಡಿ 5 ಸಾವಿರ ಕೋಟಿ ರೂ.ಗಳನ್ನು ಕಟ್ಟಡಕ್ಕಾಗಿ ದೊರಕಿಸಿಕೊಟ್ಟಿದ್ದನ್ನು ನೆನಪಿಸಿಕೊಂಡರಲ್ಲದೆ, ಆಲಮಟ್ಟಿಯ ಎಂ.ಎಚ್.ಎಂ. ಶಿಕ್ಷಣ ಸಂಸ್ಥೆಯವರು ಡಿಪ್ಲೋಮಾ ಹಾಗೂ ಐಟಿಐ ಕಾಲೇಜ್ ಆರಂಭಿಸಲು ಪ್ರಸ್ತಾವನೆ ಸಲ್ಲಿಸಿದರೆ ಮಂಜೂರು ಮಾಡಿಸುವ ಜವಾಬ್ದಾರಿ ನನ್ನದಾಗಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಹಣಮಂತ ನಿರಾಣಿ ಮಾತನಾಡಿ, ಇದೊಂದು ಹೃದಯಸ್ಪರ್ಶಿ ಹಾಗೂ ಮಾದರಿಯಾದ ಕಾರ್ಯಕ್ರಮ. ಕಲಿತ ಶಾಲೆಯನ್ನು ನೆನಪಿಸಿಕೊಂಡು ಗುರುನಮನ ಜತೆಗೆ ಶಾಲೆ ಕುರಿತ ಅಭಿನಂದನ ಗ್ರಂಥ ಬಿಡುಗಡೆ ಮಾಡಿರುವುದು ಸಂತೋಷ ತಂದಿದೆ. ಆಲಮಟ್ಟಿ ಶಿಕ್ಷಣ ಕ್ಷೇತ್ರವಾಗಿ ಹಾಗೂ ಪ್ರಮುಖ ಪ್ರವಾಸಿ ತಾಣವಾಗಿ ಇನ್ನಷ್ಟು ಬೆಳೆಯಲು, ಆಲಮಟ್ಟಿಯಲ್ಲಿ ಯಾತ್ರಿ ನಿವಾಸ ಹಾಗೂ ಕಲ್ಯಾಣ ಮಂಟಪದ ಅವಶ್ಯಕತೆ ಇದೆ ಅಂದು ಅಭಿಪ್ರಾಯಪಟ್ಟರು.

ಡಿಸಿಸಿ ಬ್ಯಾಂಕ್ ನಿರ್ದೇಶಕಿ ಸಂಯುಕ್ತ ಪಾಟೀಲ ಮಾತನಾಡಿ, ಬಹುತೇಕ ಶಾಸಕರು ತಮ್ಮ ಅನುದಾನವನ್ನು ಕೇವಲ ದೇವಸ್ಥಾನ ಮತ್ತು ಸಮುದಾಯ ಭವನಗಳಿಗೆ ನೀಡುವ ಬದಲು ಶಿಕ್ಷಣ ಕ್ಷೇತ್ರಕ್ಕೆ ನೀಡಬೇಕು. ದೇಶ ಮುಂದುವರೆಯಲು ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ಕೊಡಬೇಕಾಗಿದೆ. ಬಜೆಟ್‌ನಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಅನುದಾನವನ್ನು ಮೀಸಲಿಡಬೇಕು ಎಂದು ಪ್ರತಿಪಾದಿಸಿದರು.




ಆಲಮಟ್ಟಿಯ ಸಮುದಾಯ ಭವನದಲ್ಲಿ ಎಂಪಿಎಸ್ ಹಾಗೂ ಎಂಎಚ್‌ಎಂ ಶಾಲೆಯ ಹಳೆಯ ವಿದ್ಯಾರ್ಥಿ ಬಳಗದಿಂದ ಹಮ್ಮಿಕೊಂಡ ಗ್ರಂಥ ಬಿಡುಗಡೆ ಹಾಗೂ ಗುರು ಶಿಷ್ಯರ ಮಹಾಸಂಗಮ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿದರು.